2ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು ನಗರ
ಸಿ.ಸಿ.ನಂಃ 7996 ಃ 2023

| | | | |
|---|---|---|---|
| ಸಾಕ್ಷಿದಾರನ ಹೆಸರು | ಸಲ್ಮಾನ್ ಅರಳೀಕಟ್ಟಿ | ಸಿ ಡಬ್ಲ್ಯು | 8 |
| ತಂದೆಯ/ಗಂಡನ ಹೆಸರು | ಮೀರಾ ಸಾಬ್ | ಪಿ ಡಬ್ಲ್ಯು | 1 |
| ವಯಸ್ಸು | 33 ವರ್ಷ | | |
| ಉದ್ಯೋಗ | ಪಿ.ಎಸ್.ಐ, ಕರ್ನಾಟಕ ಲೋಕಾಯುಕ್ತ | | |
| ವಾಸಸ್ಥಾನ | ತ್ಯಾಗರಾಜನಗರ, ಬೆಂಗಳೂರು | | |

ಪ್ರಮಾಣ ವಚನ ಬೋಧಿಸಿದ ದಿನಾಂಕ ಃ 07.04.2025.

ಮುಖ್ಯ ವಿಚಾರಣೆ ಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ-

ನಾನು ನವೆಂಬರ್ 2019 ರಿಂದ ಫೆಬ್ರವರಿ 2022 ರವರೆಗೆ ಸಿದ್ದಾಪುರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ. ದಿಃ 20.01.2022 ರಂದು ರಾತ್ರಿ 9.05 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ದೂರನ್ನು ನಿಪಿ-1 ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1ಎ ಎಂದು ಗುರ್ತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿ-2 ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-2ಎ ಎಂದು ಗುರ್ತಿಸಲಾಯಿತು. ಮಾರನೇ ದಿನ ಬೆಳಿಗ್ಗೆ 10.00 ಗಂಟೆಗೆ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದಿ ಕೃತ್ಯ ನಡೆದ ಸ್ಥಳ ತೋರಿಸಿದ ಮೇರೆಗೆ ಚಾಸಾ-3 ಮತ್ತು 4 ರವರ ಸಮಕ್ಷಮ ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ನಿಪಿ-3 ರಂತೆ ಬೆಳಿಗ್ಗೆ 11.00 ಗಂಟೆಯಲ್ಲಿ ಜರುಗಿಸಿರುತ್ತೇನೆ. ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-3ಎ ಎಂದು ಗುರ್ತಿಸಿದ್ದೇನೆ. ಪಂಚರಿಗೆ ನೋಟೀಸ್ ನೀಡಿರುತ್ತೇನೆ. ಸದರಿ ನೋಟೀಸನ್ನು ನಿಪಿ 4 ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-4ಎ ಎಂದು ಗುರ್ತಿಸಿದ್ದೇನೆ. ಅದೇ ದಿನ ಚಾಸಾ 6 ಮತ್ತು 7 ರವರ ವರದಿಯೊಂದಿಗೆ ಆರೋಪಿಯನ್ನು ಹಾಜರುಪಡಿಸಿರುತ್ತಾರೆ. ಅದೇ ದಿನ ಚಾಸಾ-5 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ದಿಃ 27.01.2022 ಚಾಸಾ 1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ಸದರಿ ಗಾಯದ ಪ್ರಮಾಣ ಪತ್ರವನ್ನು ನಿಪಿ 6

ಎಂದು ಗುರುತಿಸಲಾಯಿತು. ಅದೇ ದಿನ  ಚಾಸಾ 9 ರವರು ಮುಂದಿನ ತನಿಖೆಗಾಗಿ ಕಡತವನ್ನು ನೀಡಿರುತ್ತೇನೆ. ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ .

<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>

ಚಾಸಾ1 ರವರು ಯಾವುದೇ ದೂರನ್ನು ಕೊಟ್ಟಿರುವುದಿಲ್ಲ ಮತ್ತು ನಾನು ಸುಳ್ಳು ಪ್ರರಕಣ ನೊಂದಣಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಮಾರನೇ ದಿನ ಬೆಳಿಗ್ಗೆ 10.00 ಗಂಟೆಗೆ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದಿ ಕೃತ್ಯ ನಡೆದ ಸ್ಥಳ ತೋರಿಸಿದ ಮೇರೆಗೆ ಚಾಸಾ-3 ಮತ್ತು 4 ರವರ ಸಮಕ್ಷಮ ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ನಿಪಿ-3 ರಂತೆ ಬೆಳಿಗ್ಗೆ 11.00 ಗಂಟೆಯಲ್ಲಿ ಜರುಗಿಸಿರುವುದಿಲ್ಲ ಎಂದರೆ ಸರಿಯಲ್ಲ. ಪಂಚರಿಗೆ ನೋಟೀಸನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ.  ಚಾಸಾ 6 ಮತ್ತು 7 ರವರ ವರದಿಯೊಂದಿಗೆ ಆರೋಪಿಯನ್ನು ಹಾಜರುಪಡಿಸಿರುವುದಿಲ್ಲ ಎಂದರೆ ಸರಿಯಲ್ಲ. ಅದೇ ದಿನ ಚಾಸಾ-5 ರವರ ಹೇಳಿಕೆಯನ್ನು ಪಡೆದಿರುವುದಿಲ್ಲ ಎಂದರೆ ಸರಿಯಲ್ಲ.  ದಿಃ 27.01.2022 ಚಾಸಾ 1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.  ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇದೆ

(ಸಾಹೀಲ್ ಅಹ್ಮದ್ ಎಸ್ ಕುನ್ನಿಭಾವಿ)

2ನೇ ಅ ಮು ಮ ದಂ.